# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2088(2442)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ

(ಅ) ಬೀದರ್ ನಗರದಲ್ಲಿ ಒಳಚರಂಡಿ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಕಾರ್ಯಕ್ಕೆ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಒಳಚರಂಡಿ ನಿರ್ಮಾಣ ಹಂತ 1ರ ಕಾಮಗಾರಿ ಯಾವ ಹಂತದಲ್ಲಿದೆ; ಹಾಗೂ ಪೂರ್ಣಗೊಂಡಿದ್ದ ಕಡೆಗಳಲ್ಲಿ ಸಾರ್ವಜನಿಕರಿಗೆ ಸರಿಯಾಗಿ ಉಪಯೋಗವಾಗದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಯೋಜನೆ ವಿಫಲವಾಗಲು ಕಾರಣಗಳೇನು; (ಮಾಹಿತಿ ನೀಡುವುದು)

(ಇ) ಅಮೃತ್ ಯೋಜನೆ ಅಡಿಯಲ್ಲಿ 3ರ ಹಂತಗಳಲ್ಲಿನ ಕಾಮಗಾರಿಗಳ ಪೈಕಿ ಕೈಗೆತ್ತಿಕೊಂಡ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಕಾಮಗಾರಿ ಪೂರ್ಣಗೊಂಡಿದ್ದಲ್ಲಿ ಇದಕ್ಕೆ ತಗುಲಿರುವ ವೆಚ್ಚ ಎಷ್ಟು; ಈ ಕಾಮಗಾರಿಗಳ ನಿರ್ವಹಣೆ ಸರಿಯಾದ ರೀತಿಯಲ್ಲಿ ಆಗದಿರುವುದಕ್ಕೆ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಗರಕ್ಕೆ ಸಮರ್ಪಕವಾಗಿ ಕುಡಿಯುವ ನೀರನ್ನು ಪೂರೈಕೆ ಮಾಡಲು ಎಷ್ಟು ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಈ ಕಾಮಗಾರಿಗಳಿಗೆ ಖರ್ಚಾದ ವೆಚ್ಚ ಎಷ್ಟು; ಕಾಮಗಾರಿಗಳು ಯಾವ ಹಂತದಲ್ಲಿದೆ; (ಕಾಮಗಾರಿವಾರು ಮಾಹಿತಿ ನೀಡುವುದು)

(ಉ) ಈ ಯೋಜನೆ ಅಡಿಯಲ್ಲಿ ಪ್ರತಿದಿನ ಕುಡಿಯುವ ನೀರು ಲಭ್ಯವಾಗದೆ ಇರಲು ಕಾರಣಗಳೇನು; ಪ್ರತಿ ದಿನ ಕುಡಿಯುವ ನೀರು ಪೂರೈಕೆ ಮಾಡಲು ಕೈಗೊಂಡಿರುವ ಶಾಶ್ವತ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು)